# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 15/4/2021

**ನಿಧನ ವಾರ್ತೆ**

### ರಂಗಕರ್ಮಿ ಎಲ್‌.ಬಿ.ಕೆ. ಆಲ್ದಾಳ



ಶಹಾಪುರ (ಯಾದಗಿರಿ ಜಿಲ್ಲೆ): ರಂಗಕರ್ಮಿ ಲಾಲ್ ಮಹ್ಮದ ಬಂದೇನವಾಜ ಖಲೀಫ್ ಆಲ್ದಾಳ (ಎಲ್.ಬಿ.ಕೆ. ಆಲ್ದಾಳ) ಸೋಮವಾರ ಇಲ್ಲಿ ಅನಾರೋಗ್ಯದಿಂದ ನಿಧನರಾದರು. ಅವರಿಗೆ 85 ವರ್ಷ ವಯಸ್ಸಾಗಿತ್ತು.

ವಿಜಯಪುರ ಜಿಲ್ಲೆ ಬನ್ನಟ್ಟಿ ಗ್ರಾಮದಲ್ಲಿ ಜನಿಸಿದ್ದ ಅವರು, ತಾಯಿಯ ತವರು ಮನೆ ಕಲಬುರ್ಗಿ ಜಿಲ್ಲೆ ಯಡ್ರಾಮಿ ತಾಲ್ಲೂಕಿನ ಮಳ್ಳಿ ಗ್ರಾಮದಲ್ಲಿ ನೆಲೆಸಿದ್ದರು.

ಎರಡು ದಿನಗಳಿಂದ ಶಹಾಪುರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಅವರಿಗೆ ಇಬ್ಬರು ಪುತ್ರರು, ಒಬ್ಬ ಪುತ್ರಿ ಇದ್ದಾರೆ.

ಅವರ ಅಂತ್ಯಕ್ರಿಯೆ ಮಂಗಳವಾರ (ಏ.13) ಮಧ್ಯಾಹ್ನ 1ಕ್ಕೆ ಮಳ್ಳಿ ಗ್ರಾಮದಲ್ಲಿ ನೆರವೇಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕರ್ನಾಟಕ ರಾಜ್ಯೋತ್ಸವ, ಗುಬ್ಬಿ ವೀರಣ್ಣ ಪ್ರಶಸ್ತಿ ಪುರಸ್ಕೃತರಾಗಿದ್ದ ಅವರು 125ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದರು.